ಯೋಜನೆಯಡಿಯಲ್ಲಿ 18 ವರ್ಷಕ್ಕೂ ಮೇಲ್ಪಟ್ಟ ಹಾಗೂ 6,000 ರೂ.ಗಳಿಗಿಂತ ಕಡಿಮೆ ವಾರ್ಷಿಕ ಆದಾಯವಿರುವ ವಿಧವೆ ವಿಧಾವಾ ವೇತನಕ್ಕೆ ಅರ್ಹಳಾಗಿರುತ್ತಾಳೆ. ಈ ಕಾರ್ಯಕ್ರಮಗಳಡಿಯಲ್ಲಿ ಆ ವ್ಯಕ್ತಿಯು 18 ವರ್ಷಕ್ಕೂ ಮೇಲ್ಪಟ್ಟ ಮಗ ಅಥವಾ ಮಗಳಿದ್ದರೂ ಈ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ. ಆದರೆ ಇಂತಹ ಪ್ರಕರಣಗಳಲ್ಲಿ ಮಂಜೂರು ಮಾಡುವ ಪ್ರಾಧಿಕಾರವು ಇಂತಹ ಮಗ ಅಥವಾ ಮಗಳು ಫಲಾನುಭವಿಯನ್ನು ಕೈಬಿಟ್ಟಿದ್ದು, ಫಲಾನುಭವಿ ಅವರಿಂದ ಯಾವುದೇ ಸಹಾಯ ಪಡೆಯುತ್ತಿಲ್ಲವೆಂದು ಮನದಟ್ಟು ಮಾಡಿಕೊಳ್ಳ-ಬೇಕಾಗಿರುತ್ತದೆ. ಕೆಲವು ಜಿಲ್ಲೆಗಳಲ್ಲಿ 18 ವರ್ಷಕ್ಕಿಂತ ಮೇಲ್ಪಟ್ಟ ವಯಸ್ಸಿನ ಮಕ್ಕಳಿರುವ ಫಲಾನುಭವಿಗಳಿಗೆ ವೇತನವನ್ನು ಮಂಜೂರು ಮಾಡುವಲ್ಲಿ ಗೊಂದಲವಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಸರ್ಕಾರವು ಈ ವಿಷಯವನ್ನು ಸ್ಪಷ್ಟೀಕರಿಸುತ್ತಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯೊಂದಿಗೆ ಸಮಾಲೋಚಿಸಿ ಕೂಡಲೇ ಸುತ್ತೋಲೆ ಹೊರಡಿಸುವುದು.

ಪಿರಿಯಾಪಟ್ಟಣ ಟೌನ್‌ನಲ್ಲಿ ಬೈಪಾಸ್ ರಸ್ತೆ ನಿರ್ಮಾಣ

287 (2340) ಶ್ರೀ ಬಸವರಾಜು ಹೆಚ್.ಸಿ.(ಪಿರಿಯಾಪಟ್ಟಣ) ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಪಿರಿಯಾಪಟ್ಟಣ ನಗರ ಮಧ್ಯ ಭಾಗದಲ್ಲಿ ಹಾದು ಹೋಗುವ ರಸ್ತೆಯನ್ನು ಮೇಲ್ದರ್ಜೆಗೇರಿಸಲಾಗಿದ್ದು, ಅದನ್ನು ನಗರ ಪ್ರದೇಶದಿಂದ ಹೊರಗೆ ಬೈಪಾಸು ಸರ್ವೆಕಾರ್ಯ ಮುಗಿಸಲಾಗಿದ್ದು, ರಸ್ತೆ ನಿರ್ಮಿಸುವ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

ಆ) ಈ ಯೋಜನೆಗೆ ತಗಲುವ ವೆಚ್ಚ ಎಷ್ಟು ಹಾಗೂ ಯೋಜನೆಯನ್ನು ಪ್ರಾರಂಭಿಸುವುದು ಯಾವಾಗ;

ಇ) ಈ ಯೋಜನೆಯನ್ನು ಎಷ್ಟು ಅವಧಿಯೊಳಗೆ ಪೂರ್ಣಗೊಳಿಸಲಾಗುವುದು;

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು) :

ಅ) ಕರ್ನಾಟಕದಲ್ಲಿನ 175 ತಾಲ್ಲೂಕು ಕೇಂದ್ರಗಳಲ್ಲಿ 2001ರ ಜನಗಣತಿಯಂತೆ ಪಿರಿಯಾಪಟ್ಟಣವು ಜನಸಂಖ್ಯೆ ಆಧಾರದ ಮೇಲೆ 153 ನೇ ಸ್ಥಾನದಲ್ಲಿದೆ. (ಜನಸಂಖ್ಯೆ ಕೇವಲ 14922) ಇದಕ್ಕಿಂತ ಹೆಚ್ಚು ಜನಸಂಖ್ಯೆ ಇರುವ ಇನ್ನುಳಿದ ಎಲ್ಲ ತಾಲ್ಲೂಕು ಕೇಂದ್ರಗಳಿಗೆ ಬೈಪಾಸ್ ರಸ್ತೆಗಳನ್ನು ನಿರ್ಮಿಸಲು ಇನ್ನೂ ಸಾಧ್ಯವಾಗಿಲ್ಲ. ಆದುದರಿಂದ ಈ ಹಂತದಲ್ಲಿ ಇಷ್ಟು ಕಡಮೆ ಜನಸಂಖ್ಯೆ ಇರುವ ಪಿರಿಯಾಪಟ್ಟಣಕ್ಕೆ ಬೈಪಾಸ್ ನಿರ್ಮಿಸಲು ಸಾಧ್ಯವಾಗುವುದಿಲ್ಲ.

ಆ) ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಹೊಸ ತಾಲ್ಲೂಕು ರಚನೆ

288 (2457) ಶ್ರೀ ಗಡ್ಡದೇವರಮಠ ಗದ್ದಯ್ಯ ಶಿವಮೂರ್ತಯ್ಯ (ಶಿರಹಟ್ಟಿ) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಉದ್ದೇಶಿತ ಹೊಸ ತಾಲ್ಲೂಕುಗಳ ರಚನೆಯ ಕುರಿತು ಸರಕಾರ ಅನುಸರಿಸುತ್ತಿರುವ ಮಾನದಂಡ ಏನು ;